## ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 59 ಸಿಜಿಎಂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ: 25.03.2021

## ಆದೇಶ

ವಿಶ್ವ ಆರೋಗ್ಯ ಸಂಸ್ಥೆಯು ಈಗಾಗಲೇ ಸಾಂಕ್ರಾಮಿಕ ರೋಗವೆಂದು ಘೋಷಿಸಿರುವ ಕೋವಿಡ್-19 ಸೋಂಕಿನ ಹರಡುವಿಕೆಯನ್ನು ತಡೆಗಟ್ಟುವ ನಿಟ್ಟನಲ್ಲಿ ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (SDMA) ವೂ ಸಹ ಕಾಲಕಾಲಕ್ಕೆ ಹಲವು ಆದೇಶಗಳು / ನಿಯಮಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಹೊರಡಿಸಿದ್ದು, ಅದರಂತೆ, ಪರಿಸ್ಥಿತಿಯ ಸೂಕ್ತ ನಿರ್ವಹಣೆಗಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದೆ. ಪ್ರಸ್ತುತ, ಕರ್ನಾಟಕ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕದ ಹರಡುವಿಕೆಯ ಆತಂಕವು ಪುನಃ ಪ್ರಾರಂಭವಾಗಿದೆ.

2.ಕೋವಿಡ್-19 ಪರಿಸ್ಥಿತಿಯನ್ನು ಪರಿಗಣಿಸಿ, ಪುನರಾವಲೋಕನ ಮಾಡಿದ ಹಿನ್ನೆಲೆಯಲ್ಲಿ, ಕಳೆದ 15 ದಿನಗಳಿಂದ, ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳು ಸತತವಾಗಿ ಏರಿಕೆಯಾಗುತ್ತಿರುವುದನ್ನು ಗಮನಿಸಲಾಗಿದೆ. ಮುಂಬರುವ ಯುಗಾದಿ, ಹೋಳಿ ಹಬ್ಬ, ಷಬ್ – ಎ – ಬರಾತ್, ಗುಡ್ ಫ್ರೈ ಡೇ ಇತ್ಯಾದಿ, ಹಬ್ಬಗಳ ಸಂದರ್ಭಗಳ ನಡೆಯಬಹುದಾದ ಸಮಾರಂಭಗಳು, ಆಚರಣೆಗಳು ಹಾಗೂ ಸಾರ್ವಜನಿಕರು ಗುಂಪು ಸೇರಬಹುದಾದ ಇತರ ಚಟುವಟಿಕೆಗಳು . ಸೋಂಕು ಹರಡುವಿಕೆಯನ್ನು ಗಣನೀಯವಾಗಿ ಹೆಚ್ಚಿಸಹುದಾದ ಆತಂಕದ ಜೊತೆಗೆ, ಕೋವಿಡ್ 19 ಹರಡುವಿಕೆಯು ನಿಯಂತ್ರಣದಲ್ಲಿ ಈವರೆಗೆ ಸಾಧಿಸಲಾಗಿರುವ ಗಮನಾರ್ಹ ಲಾಭಕ್ಕೆ ಹಿನ್ನಡೆಯಾಗುವ ಎಲ್ಲಾ ಸಾಧ್ಯತೆಗಳಿವೆ. ಈ ಹಿನ್ನೆಲೆಯಲ್ಲಿ, ಮುಂಬರುವ ಹಬ್ಬಗಳ ಸಂದರ್ಭದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ರೀತಿಯ ಆಚರಣೆಗಳು ಹಾಗೂ ಸಮಾರಂಭಗಳನ್ನು ಆಚರಿಸದಿರಲು ನಿರ್ಧರಿಸಲಾಗಿದೆ.

3. ಪ್ರಸ್ತುತ, ಆದ್ದರಿಂದ, ವಿಪತ್ತು ನಿರ್ವಹಣಾ ಕಾಯ್ದೆ 2005 ರ ವಿಭಾಗ 22ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಅಧ್ಯಕ್ಷರು , ರಾಜ್ಯ ಕಾರ್ಯಕಾರಿ ಸಮಿತಿ, ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರ ಸಾಮರ್ಥ್ಯದಿಂದ ಈ ಕೆಳಸಹಿದಾರನಾಗಿ, ಆಯುಕ್ತರು, ಬಿ ಬಿ ಎಂಪಿ, ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳಿಗೆ ಈ ಮೂಲಕ ನಿರ್ದೇಶಿಸುವುದೇನೆಂದರೆ, ಮುಂಬರುವ ಧಾರ್ಮಿಕ ಹಬ್ಬಗಳಾದ ಯುಗಾದಿ, ಹೋಳಿ ಹಬ್ಬ, ಷಬ್ – ಎ – ಬರಾತ್, ಗುಡ್ ಫ್ರೈ ಡೇ ಇತ್ಯಾದಿ, ಹಬ್ಬಗಳ ಸಂದರ್ಭಗಳಲ್ಲಿ ಕರ್ನಾಟಕ ರಾಜ್ಯದ ಯಾವುದೇ ಸಾರ್ವಜನಿಕ ಸ್ಥಳಗಳು / ಸಾರ್ವಜನಿಕ ಮೈದಾನ/ ಸಾರ್ವಜನಿಕ ಉದ್ಯಾನವನಗಳು / ಮಾರುಕಟ್ಟೆಗಳು/ ಧಾರ್ಮಿಕ ಪ್ರದೇಶಗಳು, ಇತ್ಯಾದಿಗಳಲ್ಲಿ ಸಾರ್ವಜನಿಕ ಸಮಾರಂಭಗಳು / ಸಭೆಗಳನ್ನು ನಡೆಸದಂತೆ ಖಚಿತ ಪಡಿಸಿಕೊಳ್ಳುವುದು.

4. ಆಯುಕ್ತರು, ಬಿ ಬಿ ಎಂ ಪಿ, ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳು ಈ ಆದೇಶವು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳುವುದು. ಮತ್ತು ಸದರಿ ಆದೇಶ ಬಗ್ಗೆ ಸೂಕ್ತ ಮಾಹಿತಿಯನ್ನು ಕ್ಷೇತ್ರ ಕಾರ್ಯಕಾರಿಗಳಗೆ (field functionaries) ನೀಡುವುದು. ಈ ನಿಯಮಗಳನ್ನು ರೂಪ ಹಾಗೂ ವಿಷಯದಲ್ಲಿ ಯಥಾವತ್ತಾಗಿ ಅನುಪಾಲನೆಯಾಗುವುದನ್ನು ಖಚಿತಪಡಿಸಿಕೊಳ್ಳಲು ಸೂಚಿಸಿದೆ.

5. ಈ ಮೇಲೆ ತಿಳಿಸಿದ ನಿಯಮಗಳನ್ನು ಯಾವುದೇ ವ್ಯಕ್ತಿ/ ವ್ಯಕ್ತಿಗಳು ಉಲ್ಲಂಘಿಸಿದ ಪಕ್ಷದಲ್ಲಿ, ಅಂತಹ ವ್ಯಕ್ತಿ/ ವ್ಯಕ್ತಿಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ, 2005 ರ ವಿಭಾಗ 51 ರಿಂದ 60 ರ ಅನ್ವಯ, ಐಪಿಸಿ ಸೆಕ್ಷನ್ 188 ರಂತೆ ಹಾಗೂ ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ, 2020ರ ವಿಭಾಗ 4,5 ಮತ್ತು 10 ರಂತೆ ಕ್ರಮಗಳನ್ನು ಜರುಗಿಸಲಾಗುವುದು.

(ಬಿ. ರವಿ ಕುಮಾರ್ )
ಸರ್ಕಾರದ ಮುಖ್ಯ ಕಾರ್ಯದರ್ಶಿ
ಕರ್ನಾಟಕ ಸರ್ಕಾರ

ಇವರಿಗೆ,

ಸಂಕಲನಕಾರರು, ಕರ್ನಾಟಕ ಗೆಜೆಟ್, ಬೆಂಗಳೂರು, ವಿಶೇಷ ಗೆಜೆಟ್ ನಲ್ಲಿ ತುರ್ತಾಗಿ ಪ್ರಕಟಿಸಲು

ಪ್ರತಿಯನ್ನು ಮಾಹಿತಿಗಾಗಿ, ಕ್ರೋಢೀಕರಿಸಲು ಹಾಗೂ ಪ್ರಸಾರಕ್ಕಾಗಿ,

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
2. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು
3. ಆಯುಕ್ತರು / ವಿಶೇಷ ಆಯುಕ್ತರು, ಬಿ ಬಿ ಎಂಪಿ
4. ಎಲ್ಲಾ ಜಿಲ್ಲಾಧಿಕಾರಿಗಳು
5. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
7. ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು.
8. ಎಲ್ಲಾ ವಿಭಾಗೀಯ ಜಂಟಿ ನಿರ್ದೇಶಕರು / ಜಂಟಿ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
9. ಮುಖ್ಯ ಆರೋಗ್ಯಾಧಿಕಾರಿಗಳು, ಬಿ ಬಿ ಎಂಪಿ
10. ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು/ ಜಿಲ್ಲಾ ಸರ್ಜನರು/ ಆಡಳಿತ ಆರೋಗ್ಯಾಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳು/ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳ ವೈದ್ಯಕೀಯ ಅಧೀಕ್ಷಕರು.